ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
**ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್**
**ನಿರ್ಮಲ ಭಾರತ್ ಅಭಿಯಾನ**

ಸಂಖ್ಯೆ :ಗ್ರಾಅಪ/ರಾನೀನೈಮಿ/ನಿಭಾಅ/ಸಿ.ಇ.ಒ-14/2013-14/420. ದಿನಾಂಕ :25.11.2013

**ರವರಿಗೆ,**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಎಲ್ಲಾ ಜಿಲ್ಲಾ ಪಂಚಾಯಯತ್.
(ಕೊಪ್ಪಳ ಜಿಲ್ಲೆ ಹೊರತುಪಡಿಸಿ)

**ಮಾನ್ಯರೆ,**

**ವಿಷಯ:** ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಿಕೊಳ್ಳುವಂತೆ ಜನರನ್ನು ಪ್ರೇರೇಪಣೆ ಮಾಡಲು ಕೊಪ್ಪಳ ಜಿಲ್ಲೆಯಲ್ಲಿ ಅನುಸರಿಸುತ್ತಿರುವ ಕಾರ್ಯತಂತ್ರವನ್ನು ಅಳವಡಿಸಿಕೊಳ್ಳುವ ಕುರಿತು.

**ಉಲ್ಲೇಖ:** ಮಾನ್ಯ ಪ್ರಧಾನ ಕಾರ್ಯದರ್ಶಿಗಳು ಗ್ರಾ.ಅ.ಪಂ ರಾಜ್ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 7.11.2013ರಂದು ನಡೆದ ಎಲ್ಲಾ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿಗಳ ಪ್ರಗತಿ ಪರಿಶೀಲನಾ ಸಭೆಯ ನಡಾವಳಿಗಳು.

-------------

ಮೇಲಿನ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ನಿರ್ಮಲ ಭಾರತ ಅಭಿಯಾನ ಯೋಜನೆಯಡಿ ತ್ವರಿತಗತಿಯಲ್ಲಿ ಗೃಹ ಶೌಚಾಲಯಗಳನ್ನು ನಿರ್ಮಾಣ ಮಾಡಲು ಕೊಪ್ಪಳ ಜಿಲ್ಲಾ ಪಂಚಾಯತ್ ವಿನೂತನ ಕಾರ್ಯತಂತ್ರವನ್ನು ಅಳವಡಿಸಿಕೊಂಡು ಮಾರ್ಚ್-2013ರ ಒಳಗಾಗಿ ಒಂದು ಲಕ್ಷ ಕುಟುಂಬಗಳಿಗೆ ಗೃಹ ಶೌಚಾಲಯಗಳನ್ನು ನಿರ್ಮಾಣ ಮಾಡುವ ಗುರಿಯನ್ನು ನಿಗಧಿಪಡಿಸಿಕೊಂಡು ಪ್ರಗತಿ ಸಾಧಿಸಲು ಕ್ರಮವಹಿಸಲಾಗುತ್ತಿದೆ.

**ಜಿಲ್ಲೆಯಲ್ಲಿ ಬರುವ ಎಲ್ಲಾ ಹಂತದ ಚುನಾಯಿತಿ ಪ್ರತಿನಿಧಿಗಳು, ಅರಣ್ಯ, ಕೃಷಿ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ,ಸಾರ್ವಜನಿಕ ಶಿಕ್ಷಣ ಇಲಾಖೆ,ಕಾರ್ಮಿಕ ಇಲಾಖೆ ಸೇರಿದಂತೆ ಎಲ್ಲಾ ಇತರೆ ಇಲಾಖೆಗಳ ಅಧಿಕಾರಿಗಳು ಹಾಗೂ ಆಶಾ,ಅಂಗನವಾಡಿ ಕಾರ್ಯಕರ್ತೆಯರು,ಶಿಕ್ಷಕರು,ಸಿಬ್ಬಂಧಿ, ಯುವಕ-ಯುವತಿ ಮಂಡಳಗಳು, ಸ್ವಯಂ ಸೇವಾ ಸಂಘಗಳು,ಸ್ತ್ರೀ-ಶಕ್ತಿ ಸಂಘಗಳು ಮತ್ತು ಸರ್ಕಾರೇತರ ಸಂಘ ಸಂಸ್ಥೆಗಳ ಪ್ರತಿನಿಧಿಗಳನ್ನು ತೊಡಗಿಸಿಕೊಂಡು ಅವರ ಮೂಲಕ ತಮ್ಮ ಮನೆಗಳಲ್ಲಿ ಗೃಹ ಶೌಚಾಲಯಗಳನ್ನು ನಿರ್ಮಿಸಿಕೊಳ್ಳುವಂತೆ ಗ್ರಾಮೀಣ ಸಮುದಾಯವನ್ನು ಪ್ರೇರೇಪಣೆ ಮಾಡಲು ಗುರಿಯನ್ನು ನಿಗಧಿಪಡಿಸಿ, ಅದರಂತೆ ಪ್ರಗತಿ ಸಾಧಿಸಲು ಕೊಪ್ಪಳ ಜಿಲ್ಲಾ ಪಂಚಾಯತ್ ವಿನೂತನ ಕಾರ್ಯತಂತ್ರವನ್ನು ಅಳವಡಿಸಿಕೊಂಡು ಪ್ರಗತಿಯನ್ನು ಸಾಧಿಸಲು ಕ್ರಮವಹಿಸಿರುತ್ತಾರೆ.**

ಇದೇ ಮಾದರಿಯಲ್ಲಿ ನಿಮ್ಮ ಜಿಲ್ಲೆಯಲ್ಲಿಯು ಸಹ ಈ ರೀತಿಯಾದ ವಿನೂತನ ಕಾರ್ಯತಂತ್ರವನ್ನು ಅಳವಡಿಸಿಕೊಂಡು ಎಲ್ಲಾ ಹಂತದ ಚುನಾಯಿತ ಪ್ರತಿನಿದಿಗಳು ಮತ್ತು ಅಧಿಕಾರಿಗಳನ್ನು ಈ ನಿರ್ಮಲ ಭಾರತ ಅಭಿಯಾನ ಯೋಜನೆಯಲ್ಲಿ ತೊಡಗಿಸಿಕೊಂಡು ತ್ವರಿತಗತಿಯಲ್ಲಿ ಪ್ರಗತಿ ಸಾಧಿಸಲು ಸೂಕ್ತ ಕ್ರಮವಹಿಸುವಂತೆ ತಿಳಿಸಲು ನಿರ್ದೇಶಿತಳಾಗಿರುತ್ತೇನೆ.

**ತಮ್ಮ ವಿಶ್ವಾಸಿ**

**ಮಿಷನ್ ನಿರ್ದೇಶಕರ ಪರವಾಗಿ**
ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್
ಗ್ರಾ ಅ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಯನ್ನು:**
1. ಮಾನ್ಯ ಅಧ್ಯಕ್ಷರು, ಜಿಲ್ಲಾ ಪಂಚಾಯತ್ ಕೊಪ್ಪಳ ಇವರ ಮಾಹಿತಿಗಾಗಿ.
2. ಪ್ರಧಾನ ಕಾರ್ಯದಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿಯವರ ಮಾಹಿತಿಗಾಗಿ.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಕೊಪ್ಪಳ, ಇವರ ಮಾಹಿತಿಗಾಗಿ.

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.
ದೂರವಾಣಿ ಸಂ.22221861 : - ದೂರವಾಣಿ & ಫ್ಯಾಕ್ಸ್ :-22221862 E-mail : wsrdpr@gmail.com